Akashvani : Bangalore
Regional Bulletin In Kannada
24.01.2026 / 18.40  hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಹುಬ್ಬಳ್ಳಿಯಲ್ಲಿ ಫಲಾನುಭವಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಸತಿ ಲೋಕಾರ್ಪಣೆ ; ಆಶ್ವಾಸನೆಗಳ ಈಡೇರಿಸುವ ಭರವಸೆ
- ಬೆಂಗಳೂರಿನಲ್ಲಿ ರಾಷ್ಟ್ರ ಮಟ್ಟದ ಖಾದಿ ಗ್ರಾಮೋದ್ಯೋಗ ಪ್ರದರ್ಶನ ಉದ್ಘಾಟಿಸಿದ ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ
- ನಾಳೆ ರಾಷ್ಟ್ರೀಯ ಮತದಾರರ ದಿನಾಚರಣೆ ; ಮತದಾರರ ಜಾಗೃತಿಗಾಗಿ ಬೆಂಗಳೂರಿನಲ್ಲಿ ಸೈಕಲ್ ರ್‍ಯಾಲಿ, ಪಾದಯಾತ್ರೆ ಆಯೋಜನೆ
- ನಾಳೆ ಮನ್ ಕಿ ಬಾತ್‌ನಲ್ಲಿ ಸಮಸ್ತ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ

<><*<><>*><>

ರಾಜ್ಯ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪುನರುಚ್ಚರಿಸಿದ್ದಾರೆ.  ವಸತಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಗೃಹಮಂಡಳಿ ವತಿಯಿಂದ ಇಂದು ಹುಬ್ಬಳ್ಳಿಯಲ್ಲಿ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗೃಹ ಮಂಡಳಿ ನಿರ್ಮಿಸಿರುವ ೪೨ ಸಾವಿರದ ೩೪೫ ಮನೆಗಳು ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿಯ ೪೬ ಸಾವಿರ ಮನೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅರ್ಹ ಫಲಾನುಭವಿಗಳಿಗೆ ವಿತರಿಸಿ, ಶುಭ ಹಾರೈಸಿದರು. ಬಳಿಕ ಮಾತನಾಡಿದ ಅವರು, ೨೦೨೩ರಲ್ಲಿ ಅಧಿಕಾರಕ್ಕೆ ಬಂದಾಗಿನಿಂದ ಸರ್ಕಾರದ ಪ್ರಣಾಳಿಕೆಯಂತೆ ನೀಡಲಾದ ೫೯೨ ಭರವಸೆಗಳ ಪೈಕಿ ೨೪೩ ಭರವಸೆಗಳನ್ನು ಈಗಾಗಲೇ ಈಡೇರಿಸಲಾಗಿದ್ದು, ಉಳಿದ ಭರವಸೆಗಳನ್ನು ಎರಡೂವರೆ ವರ್ಷಗಳಲ್ಲಿ ಸರ್ಕಾರ ಈಡೇರಿಸಲಿದೆ ಎಂದು ಭರವಸೆ ನೀಡಿದರು.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಈ ವೇಳೆ ರಾಜ್ಯಸಭೆಯ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಸೇರಿದಂತೆ ಸಚಿವರು, ಶಾಸಕರು, ಜನಪ್ರತಿನಿಧಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

<><*<><>*><>

ರಬಕವಿ-ಬನಹಟ್ಟಿಯಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಲಾದ ಮನೆಗಳ ಲೋಕಾರ್ಪಣೆ ಕಾರ್ಯಕ್ರಮ ಇಂದು ನೆರವೇರಿತು. ಕಾರ್ಯಕ್ರಮದ ಭಾಗವಾಗಿ ಅಬಕಾರಿ ಸಚಿವರು

ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಮನೆಗಳನ್ನು ಉದ್ಘಾಟಿಸಿ ಲಾಭಾನ್ವಿತರಿಗೆ ಹಸ್ತಾಂತರಿಸಿದರು. ಲೋಕಾರ್ಪಣಾ ಸಮಾರಂಭದಲ್ಲಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಕೊಳಗೇರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದೆ. ಗೃಹ ಯೋಜನೆಗಳ ಮೂಲಕ ದುರ್ಬಲ ವರ್ಗಗಳಿಗೆ ಸುರಕ್ಷಿತ ವಾಸಸ್ಥಾನ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಇದರಿಂದ ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಭಾವನೆ ಬಲಪಡಿಸಲಾಗುತ್ತಿದೆ ಎಂದು ಹೇಳಿದರು. ಈ ಮನೆಗಳು ಕೇವಲ ಆಶ್ರಯವಲ್ಲ. ಗೌರವಯುತ ಜೀವನಕ್ಕೆ ಮೂಲಾಧಾರವೆಂದು ಸಚಿವರು ಲಾಭಾನ್ವಿತ ಕುಟುಂಬಗಳನ್ನು ಅಭಿನಂದಿಸಿದರು.

<><*<><>*><>

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಂದ ಸರ್ಕಾರ ಶೇಕಡ ೨೫ ರಷ್ಟು ಖರೀದಿ ಮಾಡುವಂತೆ ಆದೇಶಿಸಿದೆ. ಆದರೆ ಈ ವರ್ಷ ಆ ಮಿತಿಯನ್ನು ಮೀರಿ ಶೇಕಡ ೩೩ ರಷ್ಟು ಎಲ್ಲಾ ಇಲಾಖೆಗಳಿಂದ ಸರ್ಕಾರ ಖರೀದಿ ಮಾಡಿದೆ ಎಂದು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದಾಜೆ ತಿಳಿಸಿದ್ದಾರೆ. ಬೆಂಗಳೂರಿನ ಜಾಲಹಳ್ಳಿ ಸಮೀಪದ ಎಚ್ಎಂಟಿ ಮೈದಾನದಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರ ಮಟ್ಟದ ಖಾದಿ ಗ್ರಾಮೋದ್ಯೋಗ ಪ್ರದರ್ಶನ - ೨೦೨೬ ಮತ್ತು ಖಾದಿ ಕುಶಲಕರ್ಮಿ ಫಲಾನುಭವಿಗಳಿಗೆ ಯಂತ್ರೋಪಕರಣಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎಲ್ಲಾ ವರ್ಗದ ಉದ್ಯಮಗಳಿಂದ ಉತ್ತಮವಾದ ಗುಣಮಟ್ಟದಲ್ಲಿ ಉತ್ಪನ್ನ ತಯಾರು ಮಾಡಿದರೆ ಎಲ್ಲಾ ಇಲಾಖೆಗಳು ಮುಂದಾಗುತ್ತವೆ. ಆ ಮೂಲಕ ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಾರುಕಟ್ಟೆಗಳನ್ನು ಆಕರ್ಷಿಸಬಹುದು ಎಂದು ಸಲಹೆ ನೀಡಿದರು.

ಧ್ವನಿ : ಶೋಭಾ ಕರಂದ್ಲಾಜೆ

ರಾಷ್ಟ್ರಮಟ್ಟದ ಖಾದಿ ಗ್ರಾಮದ್ಯೋಗ ಪ್ರದರ್ಶನದ ಬಗ್ಗೆ ಖಾದಿ ಗ್ರಾಮದ್ಯೋಗದ ಉಪ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಲ್.ಮದನ ಕುಮಾರ್ ರೆಡ್ಡಿ ಮಾಹಿತಿ ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಸಚಿವರು ಮಹಾತ್ಮ ಗಾಂಧೀಜಿ ಯವರ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು

<><*<><>*><>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<><*<><>*><>

ರಾಜ್ಯ ಉತ್ತಮ ಸ್ಥಿತಿಗೆ ಬರಬೇಕಾದರೆ ಜಾತಿ ತಾರತಮ್ಯ ಕೊನೆಗೊಳ್ಳಬೇಕು ಎಂದು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಜೆಡಿಎಸ್ ಪಕ್ಷದ ಬೆಳ್ಳಿ ಹಬ್ಬದ ಅಂಗವಾಗಿ ಹಾಸನದಲ್ಲಿ ನಡೆದ ಜೆಡಿಎಸ್ ಜನತಾ ಸಮಾವೇಶ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕಾವೇರಿ ನೀರಿನ ಹಂಚಿಕೆ ವಿಚಾರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಸಲಹೆ ಪಡೆಯಲು ಸಭಾಪತಿಗಳಿಗೆ ಮನವಿ ಮಾಡಲಾಗಿದೆ. ಹಲವು ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ರಾಜ್ಯದಲ್ಲಿ ಬೆಳೆದ ಬೆಳೆಗಳಿಗೆ ಸೂಕ್ತ ಬೆಲೆ ಇಲ್ಲದೆ ರೈತರು ಕಂಗಾಲಾಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

<><*<><>*><>

ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಅಡಿಯಲ್ಲಿನ 'ಮೇರಾ ಯುವ ಭಾರತ್' ಸಂಸ್ಥೆಯು ನಾಳೆ ಬೆಂಗಳೂರಿನಲ್ಲಿ ರಾಷ್ಟ್ರೀಯ ಮತದಾರರ ದಿನದ ಅಂಗವಾಗಿ ಸೈಕಲ್ ರ್‍ಯಾಲಿ ಮತ್ತು ಪಾದಯಾತ್ರೆಯನ್ನು ಆಯೋಜಿಸಿದೆ. "ನನ್ನ ಭಾರತ ನನ್ನ ಮತ" ಎಂಬ ಘೋಷವಾಕ್ಯದಡಿ ನಡೆಯಲಿರುವ ಈ ಕಾರ್ಯಕ್ರಮವು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಯುವಜನರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಕಾರ್ಯಕ್ರಮವು ನಾಳೆ ಬೆಳಿಗ್ಗೆ ೮ ಗಂಟೆಗೆ ಶಾಂತಿನಗರದ ಹಾಕಿ ಕ್ರೀಡಾಂಗಣದಿಂದ ಸೈಕಲ್ ರ್‍ಯಾಲಿಯೊಂದಿಗೆ ಆರಂಭವಾಗಲಿದೆ. ನಂತರ ಮಧ್ಯಾಹ್ನ ೧೨.೩೦ಕ್ಕೆ ಜೆ.ಸಿ. ರಸ್ತೆಯ ಟೌನ್ ಹಾಲ್‌ನಿಂದ ಪಾದಯಾತ್ರೆ ನಡೆಯಲಿದೆ. ಯುವ ಮತದಾರರಲ್ಲಿ ಮತದಾನದ ಪ್ರಾಮುಖ್ಯತೆ ಮತ್ತು ನೈತಿಕ ಮತದಾನದ ಬಗ್ಗೆ ಜಾಗೃತಿ ಮೂಡಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಹೊಸ ಮತದಾರರಿಗೆ ಸನ್ಮಾನ, ಪ್ರತಿಜ್ಞಾ ವಿಧಿ ಬೋಧನೆ, ಎಪಿಕ್ ಕಾರ್ಡ್‌ಗಳ ವಿತರಣೆ ಮತ್ತು ಮತದಾರರ ಜಾಗೃತಿ ಚಲನಚಿತ್ರಗಳ ಪ್ರದರ್ಶನ ಇರಲಿದೆ. ೧೦ ಹೊಸದಾಗಿ ಗುರುತಿಸಲಾದ ಮತದಾರರು ಸೇರಿದಂತೆ ಸುಮಾರು ೧ ಸಾವಿರದ ೫೦೦ ಯುವ ಸ್ವಯಂಸೇವಕರು, ಹಿರಿಯ ಆಡಳಿತ ಅಧಿಕಾರಿಗಳು ಮತ್ತು ನಾಗರಿಕರು ಭಾಗವಹಿಸುವ ನಿರೀಕ್ಷೆಯಿದೆ. ಇಂದು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮೈ ಭಾರತ್ ಕರ್ನಾಟಕ ಉಪನಿರ್ದೇಶಕ ರಾಜೇಶ್ ಕಾರಂತ್, ಮೊದಲಬಾರಿ ಮತದಾನ ಮಾಡುವವರು ಅದನ್ನು ಒಂದು ಸಂಭ್ರಮದಂತೆ ಆಚರಿಸಬೇಕು. ಅವರಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕಾರ್ಯಕ್ರಮದಲ್ಲಿ ಹೊಸ ಮತದಾರರನ್ನು ಸನ್ಮಾನಿಸಲಾಗುವುದು ಎಂದು ಮಾಹಿತಿ ನೀಡಿದರು.

ಧ್ವನಿ; ರಾಜೇಶ್ ಕಾರಂತ್

<><*<><>*><>

ಬೆಳಗಾವಿ ಜಿಲ್ಲಾ ಬಿಜೆಪಿ ವತಿಯಿಂದ ಇಂದು ಬೆಳಗಾವಿಯಲ್ಲಿ ವಿಕಸಿತ ಭಾರತ ಉದ್ಯೋಗ ಖಾತ್ರಿ ಮತ್ತು ಅಜೀವಿಕಾ ಮಿಷನ್ ವಿಬಿ ಜಿ-ರಾಮ್-ಜಿ ಕಾಯ್ದೆಯ ಕುರಿತು ಜಾಗೃತಿ ಸಮಾವೇಶ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಕಾಂಗ್ರೆಸ್ ಪಕ್ಷ ೧೯೮೦ರಲ್ಲಿ ಉದ್ಯೋಗ ಖಾತ್ರಿ ಯೋಜನೆಯ ಕಾನೂನು ಜಾರಿಯಲ್ಲಿ ತಂದು ಕಾಲಕಾಲಕ್ಕೆ ಬದಲಾವಣೆ ತಂದು ಹೊಸ ಹೆಸರುಗಳನ್ನು ಸೇರ್ಪಡೆ ಮಾಡಿದೆ ಎಂದರು.

<><*<><>*><>

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಹತ್ತಿರ ಉತ್ಖನನ ಕಾರ್ಯ ನಡೆಯುತ್ತಿರುವ ಸ್ಥಳಕ್ಕೆ ಮಾಜಿ ಸಚಿವ ಹಾಗೂ ನರಗುಂದ ಶಾಸಕ ಸಿ.ಸಿ.ಪಾಟೀಲ್ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><*<><>*><>

ಶ್ರೀಗಂಧ ಬೆಳೆಯಿರಿ ಎಂದು ಆಗ್ರಹಿಸುವ ಸರ್ಕಾರ ಈಗ ಶ್ರೀಗಂಧ ಬೆಳೆಗಾರರ ಸಂಕಷ್ಟಗಳಿಗೆ ಸ್ಪಂದಿಸದೆ ಕಣ್ಣು ಮುಚ್ಚಿ ಕುಳಿತಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳೆಯುತ್ತಿರುವ ಶ್ರೀಗಂಧದ ಬೆಳೆ ಹಾಗೂ ಬೆಳೆಗಾರ ರೈತರಿಗೆ ಸೂಕ್ತ ರಕ್ಷಣೆ ನೀಡಬೇಕು. ಕಳ್ಳತನಕ್ಕೆ ಕಡಿವಾಣ ಹಾಕಲು ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಜಿಲ್ಲೆಯ ಶ್ರೀಗಂಧ ಬೆಳೆಗಾರರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>